# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಭೀಮರಾವ್ ಬಸವರಾಜ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 509(589) |
| ಉತ್ತರಿಸುವ ದಿನಾಂಕ | : | 08.12.2023 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಗ್ರಾಮ ಪಂಚಾಯತ್ಗಳಲ್ಲಿ ಎಷ್ಟು ಕಸ ಸಂರಕ್ಷಣಾ ಘಟಕಗಳನ್ನು ಸ್ಥಾಪಿಸಲಾಗಿದೆ; (ವಿವರ ಒದಗಿಸುವುದು) | ಬೀದರ್ ಜಿಲ್ಲೆಯ 185 ಗ್ರಾಮ ಪಂಚಾಯತ್ಗಳ ಪೈಕಿ 127 ಗ್ರಾಮ ಪಂಚಾಯತ್ಗಳಲ್ಲಿ ತ್ಯಾಜ್ಯ ವಿಲೇವಾರಿ ಘಟಕಗಳ ನಿರ್ಮಾಣಕ್ಕೆ ಅನುಮೋದನೆ ನೀಡಲಾಗಿದೆ. ಈ ಪೈಕಿ 55 ಘಟಕಗಳ ಕಾಮಗಾರಿಗಳು ಪೂರ್ಣಗೊಂಡಿರುತ್ತದೆ. ಬಾಕಿ ಘಟಕಗಳು ನಿರ್ಮಾಣದ ಹಂತದಲ್ಲಿದ್ದು, ಶೀಘ್ರದಲ್ಲಿ ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ. |
| (ಆ) | ಗ್ರಾಮ ಪಂಚಾಯತ್ಗಳಲ್ಲಿ ಸರಿಯಾಗಿ ಕಸ ವಿಲೇವಾರಿ ಆಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಗ್ರಾಮಗಳ ಕಸ ವಿಲೇವಾರಿಗೆ ಸರ್ಕಾರ ಕೈಗೊಂಡ ಕ್ರಮವೇನು?; | ಗ್ರಾಮ ಪಂಚಾಯತ್ಗಳಲ್ಲಿ ತ್ಯಾಜ್ಯ ವಿಲೇವಾರಿಗಳನ್ನು ಸಮರ್ಪಕವಾಗಿ ನಿರ್ವಹಿಸಲು ಮಹಿಳಾ ಸ್ವ-ಸಹಾಯ ಸಂಘಗಳ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟ (GPLF) ದ ಸದಸ್ಯರನ್ನು ಗುರುತಿಸಿ, ಅವರಿಗೆ ತ್ಯಾಜ್ಯ ಸಂಗ್ರಹಣೆ, ವಿಲೇವಾರಿ, ವೈಜ್ಞಾನಿಕ ನಿರ್ವಹಣೆ ಹಾಗೂ ವಾಹನ ಚಾಲನಾ ತರಬೇತಿಯನ್ನು ನೀಡಲಾಗಿರುತ್ತದೆ.<br>ಪ್ರಸ್ತುತ ಘಟಕ ಪೂರ್ಣಗೊಂಡಿರುವ ಎಲ್ಲಾ ಗ್ರಾಮಗಳಲ್ಲಿ ತ್ಯಾಜ್ಯ ನಿರ್ವಹಣೆಯು ಉತ್ತಮ ರೀತಿಯಲ್ಲಿ ನಿರ್ವಹಿಸುತ್ತಿದ್ದು, ಈ ಮಾದರಿಯನ್ನು ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಅಳವಡಿಸಲಾಗುತ್ತಿದೆ. |

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು